# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ನಡವಳಿಕೆ – ಕುರಿತು.

**ಓದಲಾಗಿದೆ:**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ.ಕಂಪ್ಲೇಂಟ್/ಉಪಲೋಕ್/ಬಿಡಿ–2249/2013/ಡಿಆರ್‌ಇ–1, ದಿನಾಂಕ:07–10–2016.

**ಪ್ರಸ್ತಾವನೆ:**

ಶ್ರೀ ಮೊಹಮ್ಮದ್ ಗೌಸ್ ಬಿನ್ ಲೇಟ್ ಖಾಸಿಂಸಾಬ್, ಚೇಳೂರು ಗ್ರಾಮ, ಬಾಗೇಪಲ್ಲಿ ತಾಲ್ಲೂಕು ಚಿಕ್ಕಬಳ್ಳಾಪುರ ಜಿಲ್ಲೆ ಇವರು ಚೇಳೂರು ಗ್ರಾಮ ಪಂಚಾಯಿತಿಯಲ್ಲಿ 2010–11ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಡಿಯಲ್ಲಿ ಮನೆಗಳನ್ನು ಹಂಚಿರುವುದು ಸರಿಯಿಲ್ಲ. ಸದರಿ ಪಂಚಾಯಿತಿ ಸದಸ್ಯರ ಹೆಂಡತಿಯವರಿಗೆ 2 ಮನೆಗಳನ್ನು ಶ್ರೀಮಂತರಿಗೂ ಮನೆಗಳನ್ನು ಹಂಚಿ ಬಡವರಿಗೆ ಮನೆ ಹಂಚದೆ ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರು ಅನ್ಯಾಯ ಮಾಡಿರುತ್ತಾರೆಂದು ಇವರ ವಿರುದ್ಧ ಲೋಕಾಯುಕ್ತ ಕಛೇರಿಗೆ ದೂರು ಸಲ್ಲಿಸಿರುತ್ತಾರೆ. ಈ ದೂರಿನ ಮೇಲೆ ಬಾಗೇಪಲ್ಲಿ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕಾಧಿಕಾರಿಗಳಿಂದ ತನಿಖಾ ವರದಿಯನ್ನು ಪಡೆದು, ಅದರಂತೆ ಅನರ್ಹ ಫಲಾನುಭವಿಗಳನ್ನು ರದ್ದುಗೊಳಿಸಲು ಚೇಳೂರು ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಇವರಿಗೆ ತಿಳಿಸಲಾಗಿದೆ ಎಂದು ವರದಿಯಲ್ಲಿ ತಿಳಿಸಿರುತ್ತಾರೆ.

ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ, ಬಾಗೇಪಲ್ಲಿ ಇವರು ಅನರ್ಹ ಫಲಾನುಭವಿಗಳನ್ನು ರದ್ದುಗೊಳಿಸಲು ಗ್ರಾಮ ಪಂಚಾಯಿತಿಯ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಇವರಿಗೆ ತಿಳಿಸಲಾಗಿದೆ ಎಂದು ತನ್ನ ತನಿಖಾ ವರದಿಯಲ್ಲಿ ಹೇಳಿರುವುದನ್ನು ಪರಿಶೀಲಿಸಿದಾಗ, 2010–11ನೇ ಸಾಲಿನಲ್ಲಿ ಬಸವ ವಸತಿ ಯೋಜನೆಯಲ್ಲಿ ಅನರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಿರುವುದು ಸ್ಪಷ್ಟವಾಗಿದ್ದು, ಈ ಮೇಲ್ಕಂಡ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡಾಗ, ಎದುರುದಾರರಾದ ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ನಿಷ್ಠೆ ಇಲ್ಲದೆ, ಕರ್ತವ್ಯಲೋಪ ಎಸಗಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುತ್ತಾರೆಂದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ, ನಿಯಮ 3(1) (ii) ಮತ್ತು (iii)ರನ್ವಯ ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ಕಂಡುಬಂದಿದ್ದರಿಂದ, ಸದರಿಯವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–ಎ ರಡಿಯಲ್ಲಿ ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸಲು, ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಮಾನ್ಯ ಉಪಲೋಕಾಯುಕ್ತ–2 ರವರು ಶಿಫಾರಸ್ಸು ಮಾಡಿರುತ್ತಾರೆ.

ಆದ್ದರಿಂದ, ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ನಿಷ್ಠೆ ಇಲ್ಲದೆ, ಕರ್ತವ್ಯಲೋಪ ಎಸಗಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುನಡೆದುಕೊಂಡಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ, ನಿಯಮ 3(1) (i), (ii) ಮತ್ತು (iii) ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದಾರೆಂದು ಕಂಡುಬಂದಿದ್ದರಿಂದ, ಸದರಿಯವರ ವಿರುದ್ಧ ಶಿಸ್ತು ನಡವಳಿಕೆ ಹೂಡಲು ಮತ್ತು ಹಾಗೆಯೇ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–ಎ ರಡಿಯಲ್ಲಿ ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸಲು, ಈ ಪ್ರಾಧಿಕಾರಕ್ಕೆ ಒಪ್ಪಿಸುವಂತೆ ಮಾನ್ಯ ಉಪಲೋಕಾಯುಕ್ತ–2 ರವರು ಶಿಫಾರಸ್ಸು ಮಾಡಿರುತ್ತಾರೆ.

..2..

ಸರ್ಕಾರವು ಮಾನ್ಯ ಉಪಲೋಕಾಯುಕ್ತ-2 ರವರ ವರದಿಯನ್ನು ಪರಿಶೀಲಿಸಿ, ಈ ಪ್ರಕರಣದಲ್ಲಿ ಒಳಗೊಂಡಿರುವ ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಉಪಲೋಕಾಯುಕ್ತ-2 ರವರಿಗೆ ವಹಿಸಲು ಸರ್ಕಾರ ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 710 ಗ್ರಾಪಂಕಾ 2016 ಬೆಂಗಳೂರು, ದಿನಾಂಕ:15-12-2016.**

ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ಅನುಸಾರ ಇಲಾಖಾ ವಿಚಾರಣೆ ನಡೆಸಲು ಸದರಿ ನಿಯಮಾವಳಿಗಳ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತ-2 ರವರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ-8ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ವಿ.ಅರುಣ್‌ಕುಮಾರ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ,**

1. ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತ-2 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಮಾನ್ಯ ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಚಿಕ್ಕಬಳ್ಳಾಪುರ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಬಾಗೇಪಲ್ಲಿ, ಚಿಕ್ಕಬಳ್ಳಾಪುರ ಜಿಲ್ಲೆ.
6. ಶ್ರೀ ನಾರಾಯಣಪ್ಪ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಚೇಳೂರು ಗ್ರಾಮ ಪಂಚಾಯಿತಿ, ಬಾಗೇಪಲ್ಲಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.
7. ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.